# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 167 |
| ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು |
| ಉತ್ತರಿಸುವ ದಿನಾಂಕ | : | 14-12-2021 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಲ್ಲಿ ಉದ್ಯೋಗಸ್ಥ ಮಾತೆಯರ ಮಕ್ಕಳ ಆರೈಕೆಗಾಗಿ ತೆರೆಯಲಾದ ಶಿಶುವಿಹಾರಗಳ ಸಂಖ್ಯೆ ಎಷ್ಟು; ರಾಜ್ಯದಲ್ಲಿರುವ ಶಿಶುವಿಹಾರಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆಯಡಿಯಲ್ಲಿ ರಾಜ್ಯದಲ್ಲಿ 544 ಶಿಶುಪಾಲನಾ ಕೇಂದ್ರಗಳು ಇರುತ್ತವೆ. ಸದರಿ ಶಿಶುಪಾಲನಾ ಕೇಂದ್ರಗಳನ್ನು "As is where basis" ಆಧಾರದ ಮೇಲೆ ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಮಂಡಳಿಯಿಂದ ಪಡೆದು ರಾಜ್ಯ ಸರ್ಕಾರದಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಜಿಲ್ಲಾವಾರು ಮಾಹಿತಿ ಅನುಬಂಧ-1ರಲ್ಲಿ ಒದಗಿಸಿದೆ.<br><br>ತಾಲ್ಲೂಕು ಪಂಚಾಯಿತಿ ಅಡಿಯಲ್ಲಿ ತಾಲ್ಲೂಕು ಮಟ್ಟದಲ್ಲಿ ದುಡಿಯುವ ಮಹಿಳೆಯರ ಮಕ್ಕಳ ಶಿಶುಪಾಲನಾ ಕೇಂದ್ರ ಯೋಜನೆಯಡಿಯಲ್ಲಿ ರಾಜ್ಯದಲ್ಲಿ ಕಾರ್ಯನಿರತ ಶಿಶುಪಾಲನಾ ಕೇಂದ್ರಗಳ ವರ್ಷವಾರು ವಿವರ ಹಾಗೂ ಮಕ್ಕಳ ಸಂಖ್ಯೆ ವಿವರ:-<br><br>ವರ್ಷ — ಕೇಂದ್ರಗಳು<br>2018-19 — 45<br>2019-20 — 45<br>2020-21 — 23<br><br>ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-2ರಲ್ಲಿ ಒದಗಿಸಿದೆ. |
| ಆ) | ರಾಜ್ಯದ ಶಿಶು ವಿಹಾರಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) | ರಾಷ್ಟ್ರೀಯ ಶಿಶುಪಾಲನಾ ಕೇಂದ್ರಗಳು ಕೋವಿಡ್-19ರ ಪ್ರಯುಕ್ತ ಮಾರ್ಚ್-2020ರಿಂದ ಕಾರ್ಯ ನಿರ್ವಹಿಸಿರುವುದಿಲ್ಲ. ಆದ್ದರಿಂದ ಅಲ್ಲಿನ ಮಕ್ಕಳ ಸಂಖ್ಯೆ ಲಭ್ಯವಿರುವುದಿಲ್ಲ.<br><br>ಪ್ರಸ್ತುತ ತಾಲ್ಲೂಕು ಪಂಚಾಯಿತಿ ಅಡಿಯಲ್ಲಿನ ಉತ್ತರ ಕನ್ನಡ ಜಿಲ್ಲೆಯ 14 ಶಿಶುಪಾಲನಾ ಕೇಂದ್ರಗಳಲ್ಲಿ 349 ಮಕ್ಕಳು ಹಾಗೂ ಮೈಸೂರು ಜಿಲ್ಲೆಯ 2 ಶಿಶುಪಾಲನಾ ಕೇಂದ್ರಗಳಲ್ಲಿ 49 ಮಕ್ಕಳಿದ್ದು, ಚಾಮರಾಜನಗರ ಹಾಗೂ ಹಾಸನ ಜಿಲ್ಲೆಗಳಲ್ಲಿ ಕೋವಿಡ್-19ರ ಪ್ರಯುಕ್ತ ಶಿಶುಪಾಲನಾ ಕೇಂದ್ರಗಳು ಕಾರ್ಯ ನಿರ್ವಹಿಸಿರುವುದಿಲ್ಲ. |